# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 504 |
| ಸದಸ್ಯರ ಹೆಸರು | : | ಡಾ.ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 21.02.2022 |
| ಉತ್ತರಿಸುವ ಸಚಿವರು | : | ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ರಾಜ್ಯದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯಲ್ಲಿ ಮಧ್ಯಾಹ್ನದ ಬಿಸಿಯೂಟ ಯೋಜನೆ ಪ್ರಾರಂಭಗೊಂಡಿದ್ದು ಯಾವಾಗ; | ಕರ್ನಾಟಕ ರಾಜ್ಯದಲ್ಲಿ ಮಧ್ಯಾಹ್ನ ಉಪಹಾರ ಯೋಜನೆಯನ್ನು 2001-2002ನೇ ಸಾಲಿನಿಂದ ಪ್ರಾರಂಭಿಸಲಾಗಿದೆ. |
| ಆ) | ಈ ಯೋಜನೆಯ ಉದ್ದೇಶವೇನು; | <u>**ಮಧ್ಯಾಹ್ನ ಉಪಹಾರ ಯೋಜನೆಯ ಉದ್ದೇಶಗಳು ಕೆಳಕಂಡಂತಿದೆ**</u><br>1) ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ ತರಗತಿ 1 ರಿಂದ 10ರ ವರೆಗೆ ವ್ಯಾಸಂಗ ಮಾಡುತ್ತಿರುವ ಮಕ್ಕಳ ದಾಖಲಾತಿ ಹಾಗೂ ಹಾಜರಾತಿಯನ್ನು ಹೆಚ್ಚಿಸುವುದು.<br>2) ಶೈಕ್ಷಣಿಕ ವರ್ಷದಲ್ಲಿ ಮಧ್ಯೆ ಶಾಲೆಯನ್ನು ತೊರೆಯದಂತೆ ತಡೆಯುವುದು.<br>3) ಪೌಷ್ಟಿಕವಾದ ಆಹಾರವನ್ನು ನೀಡುವುದರ ಮೂಲಕ ಶಾಲಾ ಮಕ್ಕಳಲ್ಲಿ ಅಪೌಷ್ಟಿಕತೆಯಿಂದ ಕಂಡುಬರುವ ರಕ್ತಹೀನತೆ, ದೃಷ್ಟಿದೋಷ ನಿವಾರಿಸಿ ಆರೋಗ್ಯವನ್ನು ವೃದ್ಧಿಗೊಳಿಸುವುದು.<br>4) ನಿರಂತರ ಕಲಿಕೆಯೊಂದಿಗೆ ಶಾಲಾ ಮಕ್ಕಳ ಕಲಿಕಾ ಸಾಮರ್ಥ್ಯವನ್ನು ಹೆಚ್ಚಿಸುವುದು.<br>5) ಸಾಮಾಜಿಕ ಸಮಾನತೆಯನ್ನು ಅಭಿವೃದ್ಧಿಗೊಳಿಸಿ ತನ್ಮೂಲಕ ರಾಷ್ಟ್ರೀಯ ಭಾವೈಕ್ಯತೆಯನ್ನು ಮಕ್ಕಳಲ್ಲಿ ಮೂಡಿಸುವುದು. |

| | | |
|---|---|---|
| | | 6) ಬರಪೀಡಿತ ಪ್ರದೇಶಗಳನ್ನಾಗಿ ಘೋಷಿಸುವ ತಾಲ್ಲೂಕುಗಳಲ್ಲಿ ಬೇಸಿಗೆ ರಜಾ ದಿನಗಳಲ್ಲಿ ಮಧ್ಯಾಹ್ನ ಬಿಸಿಯೂಟವನ್ನು ಶಾಲಾ ಮಕ್ಕಳಿಗೆ ನೀಡಿ ಪೌಷ್ಟಿಕತೆಯನ್ನು ಕಾಪಾಡುವುದು. |
| ಇ) | ಮೇಲ್ಕಂಡ ಯೋಜನೆಗೆ ವಾರ್ಷಿಕ ಸರ್ಕಾರ ಖರ್ಚು ಮಾಡುತ್ತಿರುವ ವೆಚ್ಚವೆಷ್ಟು; | 2020-21ನೇ ಸಾಲಿನಲ್ಲಿ ಮಧ್ಯಾಹ್ನ ಉಪಹಾರ ಯೋಜನೆಯಡಿ **ರೂ 1452.73 ಕೋಟಿಗಳನ್ನು** ಖರ್ಚು ಮಾಡಲಾಗಿದೆ. |
| ಈ) | ಸರ್ಕಾರಿ ಸಂಯುಕ್ತ ಪದವಿ ಪೂರ್ವ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳಿಗೆ ಮಧ್ಯಾಹ್ನದ ಬಿಸಯೂಟ ಯೋಜನೆಯನ್ನು ವಿಸ್ತರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಎಂದಿನಿಂದ ಪ್ರಾರಂಭಿಸಲಾಗುವುದು? | ಸರ್ಕಾರಿ ಸಂಯುಕ್ತ ಪದವಿ ಪೂರ್ವ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳಿಗೆ ಮಧ್ಯಾಹ್ನದ ಬಿಸಿಯೂಟ ಯೋಜನೆಯನ್ನು ವಿಸ್ತರಿಸುವ ಪ್ರಸ್ತಾವನೆ ಪ್ರಸ್ತುತ ಸರ್ಕಾರದ ಮುಂದೆ ಇರುವುದಿಲ್ಲ. |

ಇಪಿ 11 ಎಂಎಂಎಸ್ 2022

(ಬಿ.ಸಿ. ನಾಗೇಶ್)

**ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ**

**ಸಕಾಲ ಸಚಿವರು**